# ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
# KARNATAKA LEGISLATIVE ASSEMBLY RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಗೃಹ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE : 5/2/20..

## ನಿಂಬಾಳ್ಕರ್, ಹಿಲೋರಿ ವಿರುದ್ಧ ಎಫ್ಐಆರ್

» ಮೊದಲ ಪುಟದಿಂದ

**ಕ್ಲೀನ್ ಚಿಟ್ ಕೊಟ್ಟಿದ್ದರು:** ಐಎಂಎ ಅಕ್ರಮವಾಗಿ ಹಣ ಸಂಗ್ರಹಿಸುತ್ತಿರುವ ಮಾಹಿತಿ ಆಧರಿಸಿ ಕ್ರಮ ಕೈಗೊಳ್ಳುವಂತೆ ಆರ್‌ಬಿಐ ಕಮರ್ಷಿಯಲ್ ಸ್ಟ್ರೀಟ್ ಠಾಣೆಗೆ ಸೂಚಿಸಿತ್ತು. ವಿಚಾರಣೆ ನಡೆಸಿದ ಅಧಿಕಾರಿಗಳು, ನಿಯಮಾನುಸಾರ ಕಾರ್ಯ ನಿರ್ವಹಿಸುತ್ತಿದೆ ಎಂದು ವರದಿ ನೀಡಿದ್ದರು. ನಂತರ ಡಿಸಿಪಿ ಕಚೇರಿಗೆ ದೂರು ಸಲ್ಲಿಕೆಯಾಗಿದ್ದರೂ ಗಮನ ಹರಿಸಿರಲಿಲ್ಲ. ಪೊಲೀಸರು ಕ್ರಮ ಕೈಗೊಳ್ಳದೆ ಇದ್ದಾಗ ಸರಕಾರದ ಗಮನಕ್ಕೆ ತರಲಾಗಿತ್ತು. ತನಿಖೆ ನಡೆಸಿದ ಬೆಂಗಳೂರು ಜಿಲ್ಲಾಧಿಕಾರಿ ಮತ್ತು ಸಿಐಡಿ ಕೂಡಾ ಪ್ರಕರಣವನ್ನು ಮುಚ್ಚಿ ಹಾಕಲು ಪ್ರಯತ್ನಿಸಿದ್ದಲ್ಲದೆ, ಉದ್ದೇಶಪೂರ್ವಕವಾಗಿ ಕ್ಲೀನ್ ಚಿಟ್ ನೀಡಿದ್ದರು ಎಂದು ಆರೋಪಿಸಲಾಗಿದೆ.

## ನಿಂಬಾಳ್ಕರ್, ಹಿಲೋರಿ ವಿರುದ್ಧ ಎಫ್ಐಆರ್

**ಬೆಂಗಳೂರು:** ಐಎಂಎ ಬಹುಕೋಟಿ ವಂಚನೆ ಪ್ರಕರಣದಲ್ಲಿ ಐಪಿಎಸ್ ಅಧಿಕಾರಿಗಳಾದ ಹೇಮಂತ್ ನಿಂಬಾಳ್ಕರ್ ಮತ್ತು ಅಜಯ್ ಹಿಲೋರಿ ಸೇರಿದಂತೆ ಇನ್ನಿತರ ಅಧಿಕಾರಿಗಳ ವಿರುದ್ಧ ಸಿಬಿಐ ಎಫ್ಐಆರ್ ದಾಖಲಿಸಿಕೊಂಡಿದೆ.



ಹೇಮಂತ್ ನಿಂಬಾಳ್ಕರ್



ಅಜಯ್ ಹಿಲೋರಿ

ಐಎಂಎ ವಂಚನೆ ಪ್ರಕರಣ ಸಂದರ್ಭದಲ್ಲಿ ಕಮರ್ಷಿಯಲ್ ಸ್ಟ್ರೀಟ್ ಠಾಣೆಯಲ್ಲಿ ಕಾರ್ಯ ನಿರ್ವಹಿಸುತ್ತಿದ್ದ ಇನ್ಸ್‌ಪೆಕ್ಟರ್ ಎಂ.ರಮೇಶ್ ಪ್ರಥಮ ಆರೋಪಿಯಾಗಿದ್ದರೆ, ಪೂರ್ವ ಡಿಸಿಪಿಯಾಗಿದ್ದ ಅಜಯ್ ಹಿಲೋರಿ, ಎಸ್‌ಐ ಗೌರಿ ಶಂಕರ್, ಸಿಐಡಿ ಡಿವೈಎಸ್ಪಿ ಇ.ಬಿ ಶ್ರೀಧರ, ಸಿಐಡಿ ಆರ್ಥಿಕ ಅಪರಾಧಗಳ ಐಜಿಪಿ ಹೇಮಂತ್ ನಿಂಬಾಳ್ಕರ್ ಕ್ರಮವಾಗಿ 2, 3, 4 ಮತ್ತು 5ನೇ ಆರೋಪಿಗಳಾಗಿದ್ದಾರೆ. ಐಎಂಎ ಮುಖ್ಯಸ್ಥ ಮನ್ಸೂರ್ ಖಾನ್ ಮತ್ತು ನಿರ್ದೇಶಕ ನಿಜಾಮುದ್ದೀನ್ ಕ್ರಮವಾಗಿ 6 ಮತ್ತು 7ನೇ ಆರೋಪಿಗಳಾಗಿದ್ದಾರೆ.

ಐಎಂಎ ಬಹುಕೋಟಿ ಹಗರಣ

ಅಕ್ರಮ ಸಂಬಂಧ 22 ಜನರ ವಿರುದ್ಧ 3 ಪ್ರತ್ಯೇಕ ಚಾರ್ಜ್‌ಶೀಟ್‌ಗಳನ್ನು ಸಿಬಿಐ ಸಲ್ಲಿಕೆ ಮಾಡಿದೆ. ಸರಕಾರಿ ಅಧಿಕಾರಿಗಳ ವಿರುದ್ಧ ವಿಚಾರಣೆಗೆ ಇತ್ತೀಚೆಗೆ ರಾಜ್ಯ ಸರಕಾರ ಒಪ್ಪಿಗೆ ನೀಡಿತ್ತು. ಈ ಹಿನ್ನೆಲೆಯಲ್ಲಿ ಎಫ್ಐಆರ್ ದಾಖಲಿಸಿಕೊಂಡಿರುವ ಸಿಬಿಐ ತನಿಖೆ ಪೂರ್ಣಗೊಳಿಸಿ ಆರೋಪಿತ ಅಧಿಕಾರಿಗಳ ವಿರುದ್ಧ ನ್ಯಾಯಾಲಯಕ್ಕೆ ದೋಷಾರೋಪ ಪಟ್ಟಿ ಸಲ್ಲಿಸಲಿದೆ.

ಹೂಡಿಕೆ ಮೇಲೆ ಭಾರಿ ರಿಟರ್ನ್ ನೀಡುವುದಾಗಿ 2013ರಲ್ಲಿ ಆರಂಭವಾದ ಐಎಂಎ ಕಂಪನಿ ಆರ್‌ಬಿಐ, ಬ್ಯಾಂಕಿಂಗ್, ಚೀಟಿ ವ್ಯವಹಾರಕ್ಕೆ ಸಂಬಂಧಿಸಿದ ಎಲ್ಲ ನಿಯಮಗಳನ್ನು ಉಲ್ಲಂಘಿಸಿ ಸಾರ್ವಜನಿಕರಿಂದ 4 ಸಾವಿರ ಕೋಟಿ ರೂ.ಗೂ ಹೆಚ್ಚು ಹಣವನ್ನು ಸಂಗ್ರಹಿಸಿ, ಮರಳಿಸದೆ ವಂಚಿಸಿದ ಆರೋಪ ಎದುರಿಸುತ್ತಿದೆ. »10